# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 171 |
| ಸದಸ್ಯರ ಹೆಸರು | ಶ್ರೀ ಎಂ. ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 14.12.2021. |
| ಉತ್ತರಿಸುವ ಸಚಿವರು | ಗಣಿ ಮತ್ತು ಭೂವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ ಸಚಿವರು. |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಪಟ್ಟಾ ಭೂಮಿ, ಹಳ್ಳ, ತೊರೆ, ಕೆರೆ, ನದಿ, ಪ್ರದೇಶಗಳಲ್ಲಿ ಮರಳು ತೆಗೆಯಲು ಅವಕಾಶ ನೀಡುವ ಕರ್ನಾಟಕ ನೂತನ ಮರಳು ನೀತಿ, 2020 ಜಾರಿಯಲ್ಲಿದೆಯೇ; ಹಾಗಿದ್ದಲ್ಲಿ, ನೂತನ ಮರಳು ನೀತಿ ಜಾರಿಗೆ ತಂದಿರುವ ಉದ್ದೇಶಗಳೇನು; (ವಿವರ ನೀಡುವುದು) | ಜಾರಿಯಲ್ಲಿರುತ್ತದೆ.<br>ಹೊಸ ಮರಳು ನೀತಿ, 2020ನ್ನು ರಾಜ್ಯದ ಸಾರ್ವಜನಿಕ ಹಾಗೂ ಸರ್ಕಾರಿ ಕಾಮಗಾರಿಗಳಿಗೆ ಸುಲಭವಾಗಿ ಕಡಿಮೆ ದರದಲ್ಲಿ ಮರಳು ಪೂರೈಕೆ ಮಾಡುವ ಸಂಬಂಧ ಜಾರಿಗೊಳಿಸಲಾಗಿರುತ್ತದೆ. |
| ಆ) | ಈ ಹೊಸ ಮರಳು ನೀತಿಯಡಿ ಹಾಸನ ಜಿಲ್ಲೆಯಲ್ಲಿ ಮರಳು ತೆಗೆಯಲು ಗುರುತಿಸಿರುವ ಮರಳು ನಿಕ್ಷೇಪಗಳು ಯಾವುವು; ಈ ನಿಕ್ಷೇಪಗಳಲ್ಲಿ ಲಭ್ಯವಿರುವ ಮರಳಿನ ಪ್ರಮಾಣವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | I, II ಮತ್ತು III ನೇ ಶ್ರೇಣಿಯ ಹಳ್ಳ / ತೊರೆ ಮತ್ತು ಕೆರೆಗಳಲ್ಲಿ ಒಟ್ಟು 14 ಮರಳು ನಿಕ್ಷೇಪ ಪ್ರದೇಶಗಳನ್ನು ಗುರುತಿಸಿದ್ದು, ಸಂಬಂಧಪಟ್ಟ ಗ್ರಾಮ ಪಂಚಾಯತಿಗಳ ಮೂಲಕ ವಿಲೇಪಡಿಸಲು ಅಧಿಸೂಚನೆ ಹೊರಡಿಸಲಾಗಿರುತ್ತದೆ.<br>IV, V ಮತ್ತು VI ನೇ ಶ್ರೇಣಿಯ ಹೊಳೆ / ನದಿಗಳಲ್ಲಿ ಒಟ್ಟು 05 ಮರಳು ಬ್ಲಾಕ್ ಗಳನ್ನು ಗುರುತಿಸಿದ್ದು, ವಿಲೇಪಡಿಸಲು ಮೆ\|\| ಕರ್ನಾಟಕ ಸ್ಟೇಟ್ ಮಿನರಲ್ ಕಾರ್ಪೊರೇಷನ್ ಲಿ. ಇವರಿಗೆ ಅಧಿಸೂಚನೆ ಹೊರಡಿಸಲಾಗಿರುತ್ತದೆ.<br>ವಿವರಗಳನ್ನು **ಅನುಬಂಧ-01** ರಲ್ಲಿ ನೀಡಲಾಗಿದೆ |
| ಇ) | ಈ ಮರಳು ನೀತಿಯಿಂದ ರಾಜ್ಯ ಸರ್ಕಾರಕ್ಕೆ ಪ್ರಸಕ್ತ ಸಾಲಿನಲ್ಲಿ ಸಂದಾಯವಾಗಿರುವ ಆದಾಯವೆಷ್ಟು;<br>ಈ ನೀತಿಯಡಿ ಪ್ರತಿ ಮೆಟ್ರಿಕ್ ಟನ್ ಮರಳಿಗೆ ನಿಗದಿಪಡಿಸಿರುವ ದರವೆಷ್ಟು; ದರ ನಿಗದಿಪಡಿಸಲು ಅನುಸರಿಸುವ ಮಾನದಂಡಗಳೇನು; (ವಿವರ ನೀಡುವುದು) | ಪ್ರಸ್ತುತ, ಹೊಸ ಮರಳು ನೀತಿ, 2020 ಜಾರಿಯಲ್ಲಿದ್ದು, ಸದರಿ ಮರಳು ನೀತಿಯಂತೆ ದಿನಾಂಕ 01.12.2021 ರಂದು ಕರ್ನಾಟಕ ಉಪಖನಿಜ ರಿಯಾಯಿತಿ (ತಿದ್ದುಪಡಿ) ನಿಯಮಗಳು 2021 ನ್ನು ಜಾರಿಗೊಳಿಸಲಾಗಿರುತ್ತದೆ.<br>ಅಧಿಸೂಚನೆ ಹೊರಡಿಸಿರುವ ಮರಳು ನಿಕ್ಷೇಪ ಪ್ರದೇಶ / ಬ್ಲಾಕ್ ಗಳಲ್ಲಿ ಮರಳು ತೆಗೆಯುವ ಕಾರ್ಯ ಪ್ರಾರಂಭವಾಗಬೇಕಾಗಿರುತ್ತದೆ. |